ರಾಜ್ಯದಲ್ಲಿ ಇಂಗ್ಲೀಷ್ ಮಾದ್ಯಮ ಶಾಲೆಗಳಿಗೆ ಅನುಮತಿ

2908 - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ 2000-2001ನೇ ಸಾಲಿನಲ್ಲಿ ಎಷ್ಟು ಆಂಗ್ಲ ಮಾದ್ಯಮ ಶಾಲೆಗಳಿಗೆ ಅನುಮತಿ ನೀಡಲಾಗಿದೆ? ಜಿಲ್ಲಾವಾರು ಮಾಹಿತಿ ನೀಡುವುದು?*

ಆ) *ಸರ್ಕಾರಿ ಶಾಲೆಗಳಲ್ಲಿಯೂ ಸಹ 5ನೇ ತರಗತಿಯಿಂದ ಆಂಗ್ಲ ಮಾದ್ಯಮಕ್ಕೆ ಅನುಮತಿ ನೀಡಲಾಗಿದೆಯೇ?*

ಇ) *ಆಂಗ್ಲ ಮಾದ್ಯಮ ಶಾಲೆಗಳನ್ನು ಪ್ರಾರಂಭಿಸುವುದರಿಂದ ಕನ್ನಡ ಭಾಷೆ ಬೆಳವಣಿಗೆಗೆ ಅಡ್ಡಿಯಾಗುವುದಿಲ್ಲವೇ?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) 2000-2001ನೇ ಸಾಲಿನಲ್ಲಿ 5ರಿಂದ 7ನೇ ತರಗತಿಯ ಹಂತದಲ್ಲಿ ಒಟ್ಟು 25 ಹಿರಿಯ ಪ್ರಾಥಮಿಕ ಶಾಲೆಗಳಿಗೆ ಆಂಗ್ಲ ಮಾದ್ಯಮದಲ್ಲಿ ಶಾಶ್ವತ ಅನುದಾನರಹಿತವಾಗಿ ಶಾಲೆ ಆರಂಭಿಸಲು ಅನುಮತಿಸಲಾಗಿದೆ. ಜಿಲ್ಲಾವಾರು ಮಾಹಿತಿ ಲಗತ್ತಿಸಿದೆ.

ಆ) ಇಲ್ಲ.

ಇ) ಇಲ್ಲ.

ರಾಜೀವ್ ಗಾಂಧಿ ಮಿಷನ್ ಯೋಜನೆ ಅಡಿಯಲ್ಲಿ ಕುಡಿಯುವ ನೀರಿನ ಯೋಜನೆ ಕೆಲಸ ಪ್ರಾರಂಭಿಸುವುದು

2909 - ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ 19 ಹಳ್ಳಿಗಳಿಗೆ ಕುಡಿಯುವ ನೀರನ್ನು ಪೂರೈಸುವ ಕೇಂದ್ರ ಸರ್ಕಾರದ ಯೋಜನೆಗೆ ಯಾವಾಗ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ? ಹಾಗಿದ್ದಲ್ಲಿ ಎಷ್ಟು ಮೊತ್ತಕ್ಕೆ ನೀಡಲಾಗಿದೆ? ಹಾಗೂ ಈ ಕೆಲಸಕ್ಕೆ ಕೇಂದ್ರ ಸರ್ಕಾರ ಎಷ್ಟು ಹಣ ಈಗಾಗಲೇ ಬಿಡುಗಡೆ ಮಾಡಲಾಗಿದೆ?*

ಆ) *ಈ ಕೆಲಸಕ್ಕೆ ಈಗಾಗಲೇ ಎಷ್ಟು ಹಣ ಖರ್ಚಾಗಿದೆ? ಮತ್ತು ಎಷ್ಟು ದಿನಗಳಲ್ಲಿ ಈ ಕೆಲಸವನ್ನು ಪೂರ್ಣಗೊಳಿಸುವಂತೆ ಕೇಂದ್ರ ಸರ್ಕಾರದ ಆದೇಶವಿದೆ?*

ಇ) *ಈ ಕೆಲಸ ಇನ್ನೂವರೆಗೆ ಪ್ರಾರಂಭವಾಗದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*